ಪಶು ಆಸ್ಪತ್ರೆಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸುವುದು

16 (206); ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು; [ಸಂಪೂರ್ಣ ವಿವರ ನೀಡುವುದು];

ಆ) ಈ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು:

ಈ) ಈ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಮತ್ತು ಔಷಧಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಅಗತ್ಯ ಸಿಬ್ಬಂದಿಗಳನ್ನು ನೇಮಿಸಲು ಮತ್ತು ಔಷಧಿಗಳನ್ನು ಸಕಾಲದಲ್ಲಿ ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು)

ಅ) ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆಯ ಒಟ್ಟು 40 ವಿವಿಧ ಹಂತದ ಪಶುವೈದ್ಯ ಸಂಸ್ಥೆಗಳು ಕಾರ್ಯ ನಿರ್ವಹಿಸುತ್ತಿವೆ. ಅವುಗಳೆಂದರೆ 2–ಪಶು ಆಸ್ಪತ್ರೆಗಳು, 15–ಪಶು ಚಿಕಿತ್ಸಾಲಯಗಳು, 1–ಸಂಚಾರಿ ಪಶು ಚಿಕಿತ್ಸಾಲಯ, 22–ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳು.

ಆ) 7 ಪಶುವೈದ್ಯಕೀಯ ಸಂಸ್ಥೆಗಳು ಗ್ರಾಮ ಪಂಚಾಯಿತಿ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಆರ್. ಐ. ಡಿ. ಎಫ್. ಯೋಜನೆಯಡಿ ಕಟ್ಟಡ

ನಿರ್ಮಾಣ ಮಾಡಲು ಅನುದಾನ ಲಭ್ಯತೆ ಮೇಲೆ ಹಂತ ಹಂತವಾಗಿ ಕಾರ್ಯಕ್ರಮ ರೂಪಿಸಲಾಗುವುದು.

ಇ) ಆರ್. ಐ. ಡಿ. ಎಫ್. ಯೋಜನೆಯಡಿ ಹಿರಿಸಾವೆ ಪಶು ಚಿಕಿತ್ಸಾಲಯಕ್ಕೆ ನೂತನ ಕಟ್ಟಡ ಮಂಜೂರು ಮಾಡಲಾಗಿದೆ. ಅನುದಾನ ಲಭ್ಯತೆ ಆಧಾರದ ಮೇಲೆ ಹಂತ ಹಂತವಾಗಿ ಇತರೆ ಕಟ್ಟಡಗಳ ಕಾಮಗಾರಿ ತೆಗೆದುಕೊಳ್ಳಲಾಗುವುದು.

ಈ) ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಪಶುವೈದ್ಯ ಸಂಸ್ಥೆಗಳಲ್ಲಿನ ಸಿಬ್ಬಂದಿ ವಿವರ ಈ ಕೆಳಕಂಡಂತಿದೆ:

ಕ್ರ ಸಂ	ಪದನಾಮ	ಮಂಜೂರು	ಭರ್ತಿ	ಖಾಲಿ
1	ಸಹಾಯಕ ನಿರ್ದೇಶಕರು	02	01	01
2	ಪಶುವೈದ್ಯಾಧಿಕಾರಿ	17	11	06
3	ಜಾನುವಾರು ಅಧಿಕಾರಿ	2	2	0
4	ಹಿರಿಯ ಪಶುವೈದ್ಯ ಪರೀಕ್ಷಕ	11	11	0
5	ಪಶುವೈದ್ಯ ಪರೀಕ್ಷಕ	24	20	4
6	ಪಶುವೈದ್ಯಕೀಯ ಸಹಾಯಕ	17	10	07
7	ದ್ವೀತಿಯ ದರ್ಜೆ ಸಹಾಯಕ	1	0	1
8	ವಾಹನ ಚಾಲಕ	1	1	0
9	ಡಿ–ದರ್ಜೆ ನೌಕರರು	65	32	33
	ಒಟ್ಟು	**140**	**88**	**52**

ರಾಜ್ಯದ ಪಶುವೈದ್ಯ ಸಂಸ್ಥೆಗಳಿಗೆ ಔಷಧಿಗಳನ್ನು ಹೆಚ್ಚಿನ ರೀತಿಯಲ್ಲಿ ಸರಬರಾಜು ಮಾಡಲು ಪ್ರಸ್ತುತ ಸಾಲಿನಲ್ಲಿ ಹೆಚ್ಚುವರಿ ₹. 10.00 ಕೋಟಿ ವಂಟನವನ್ನು ಬಿಡುಗಡೆ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಉ) ಖಾಲಿ ಇರುವ ಸಹಾಯಕ ನಿರ್ದೇಶಕರ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲು ಕ್ರಮ ವಹಿಸಲಾಗುವುದು. ಪಶುವೈದ್ಯಾಧಿಕಾರಿಗಳ 350 ಹುದ್ದೆಗಳನ್ನು ವಿಶೇಷ ನೇಮಕಾತಿ

ನಿಯಮಗಳಡಿ ಭರ್ತಿ ಮಾಡಲು ಪ್ರಕ್ರಿಯೆ ಪ್ರಗತಿಯಲ್ಲಿದೆ. ಇತರೆ ವೃಂದಗಳಾದ ಜಾನುವಾರು ಅಧಿಕಾರಿ, ಹಿರಿಯ ಪಶುವೈದ್ಯಕೀಯ ಪರೀಕ್ಷಕರು, ಪಶುವೈದ್ಯಕೀಯ ಪರೀಕ್ಷಕರು, ಅಧೀಕ್ಷಕರ ಹುದ್ದೆಗಳನ್ನು ಮುಂಬಡ್ತಿ ನೀಡುವ ಸಂದರ್ಭದಲ್ಲಿ ಆದ್ಯತೆ ಮೇಲೆ ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

ಪಶುವೈದ್ಯಕೀಯ ಸಹಾಯಕರು, ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು, ವಾಹನ ಚಾಲಕರು, ಬೆರಳಚ್ಚುಗಾರರು, ಡಿ ದರ್ಜೆ ಹುದ್ದೆಗಳನ್ನು ನೇರ ನೇಮಕಾತಿ ಹಾಗೂ ಮುಂಬಡ್ತಿ ಮೂಲಕ ಆದ್ಯತೆಯ ಮೇಲೆ ಭರ್ತಿ ಮಾಡಲು ಕ್ರಮ ವಹಿಸಲಾಗುವುದು.

ಪ್ರಸ್ತುತ ಸಾಲಿನಲ್ಲಿ ಔಷಧಗಳ ಸರಬರಾಜಿಗಾಗಿ ₹. 32 ಕೋಟಿ ಅನುದಾನ ನಿಗದಿಪಡಿಸಲಾಗಿರುತ್ತದೆ. ನಿಗದಿಪಡಿಸಿರುವ ಅನುದಾನದಲ್ಲಿ ರಾಜ್ಯದ ಪಶುವೈದ್ಯ ಸಂಸ್ಥೆಗಳಿಗೆ ₹. 15 ಕೋಟಿ ಅನುದಾನದಲ್ಲಿ ಜಿಲ್ಲೆಗಳಿಗೆ ಸರಬರಾಜು ಮಾಡಲಾಗಿದೆ. ಉಳಿದ ಅನುದಾನದಲ್ಲಿ ಔಷಧಗಳನ್ನು ಸರಬರಾಜು ಮಾಡಲಾಗುವುದು.

ಪಶು ಚಿಕಿತ್ಸಾಲಯದ ಕಟ್ಟಡ

18 (169); ಶ್ರೀ ಬಣಕಾರ್ ಯು.ಬಿ (ಹಿರೇಕೆರೂರು)

ಅ) ಹಿರೇಕೆರೂರು ತಾಲ್ಲೂಕು ಗುಡ್ಡದ ಮಾದಾಪುರ, ಹಂಸಭಾವಿ, ಸಾಲೇನಹಳ್ಳಿ, ಪಶು ಚಿಕಿತ್ಸಾಲಯದ ಕಟ್ಟಡ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) 2015–16ನೇ ಸಾಲಿನಲ್ಲಿ ಈ ಪಶುಚಿಕಿತ್ಸಾಲಯಗಳಿಗೆ ಕಟ್ಟಡ ಕಟ್ಟುವುದರ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ;

ಇ) 2015–16ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಪಶುಚಿಕಿತ್ಸಾಲಯಗಳಿಗೆ ಕಟ್ಟಡ ಕಟ್ಟುವುದರ ಬಗ್ಗೆ ಯೋಜನೆ ರೂಪಿಸಲಾಗಿದೆ?